# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆರಡನೆಯ ಅಧಿವೇಶನ

**<u>ಕಾರ್ಯಕಲಾಪಗಳ ಪಟ್ಟಿ</u>**

**ಶುಕ್ರವಾರ, ದಿನಾಂಕ: 02ನೇ ಡಿಸೆಂಬರ್, 2016**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

### 01. ಪ್ರಶ್ನೋತ್ತರ

| | | | |
|---|---|---|---|
| ಅ) | ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಹತ್ತನೆಯ ಪಟ್ಟಿ |
| ಆ) | **ತಡೆಹಿಡಿಯಲಾದ ಪ್ರಶ್ನೆ:** 5ನೇ ಪಟ್ಟಿಯಿಂದ ಶ್ರೀ ರಘುನಾಥ ರಾವ್ ಮಲ್ಕಾಪೂರೆ, ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 67 (516) | : | **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** |
| ಇ) | ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಹತ್ತನೆಯ ಪಟ್ಟಿ |

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು:-

01. **ಕರ್ನಾಟಕ ಆಯುರ್ವೇದ, ಪ್ರಕೃತಿ ಚಿಕಿತ್ಸೆ, ಸಿದ್ಧ, ಯುನಾನಿ ಮತ್ತು ಯೋಗ ವೈದ್ಯ ವೃತ್ತಿನಿರತರ ನೋಂದಣಿ ವೈದ್ಯಕೀಯ ವೃತ್ತಿನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕ, 2016**
02. **ಕರ್ನಾಟಕ ಜೀವರಕ್ಷಕ ಮತ್ತು ವೈದ್ಯಕೀಯ ವೃತ್ತಿನಿರತರ (ತುರ್ತು ಸನ್ನಿವೇಶಗಳಲ್ಲಿ ರಕ್ಷಣೆ ಮತ್ತು ನಿಯಂತ್ರಣ) ವಿಧೇಯಕ, 2016**
03. **ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ (ಎರಡನೇ ತಿದ್ದುಪಡಿ) ವಿಧೇಯಕ, 2016**
04. **ಕರ್ನಾಟಕ ಮರಗಳ ಸಂರಕ್ಷಣೆ (ತಿದ್ದುಪಡಿ) ವಿಧೇಯಕ, 2016**
05. **ಕರ್ನಾಟಕ ಸೌಹಾರ್ದ ಸಹಕಾರಿ (ಎರಡನೇ ತಿದ್ದುಪಡಿ) ವಿಧೇಯಕ, 2016**
06. **ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕ, 2016**
07. **ಕರ್ನಾಟಕ ಸಹಕಾರ ಸಂಘಗಳ (ಎರಡನೇ ತಿದ್ದುಪಡಿ) ವಿಧೇಯಕ, 2016**

..2

## ೦೩. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀಯುತರುಗಳಾದ: ಕೆ.ಸಿ. ಕೊಂಡಯ್ಯ, ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಬಸನಗೌಡ ಆರ್. ಪಾಟೀಲ್ (ಯತ್ನಾಳ್), ಎಂ.ಕೆ. ಪ್ರಾಣೇಶ್ ಹಾಗೂ** ಇತರರುಗಳು ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಯಡಿ ಸ್ಥಳೀಯ ಸಂಸ್ಥೆಗಳ ಸಾಂವಿಧಾನಿಕ ಹಕ್ಕನ್ನು ಉಳಿಸಿಕೊಳ್ಳುವ ಮತ್ತು ಜಾರಿಗೊಳಿಸುವ ನಿಟ್ಟಿನಲ್ಲಿ ಶ್ರೀ ರಮೇಶ್ ಕುಮಾರ್ ಸಮಿತಿಯ ವರದಿಯನ್ನು ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸಿರುವ ವಿಷಯದ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಿಂದ ಉತ್ತರ**.

**ಆ) ಶ್ರೀ ಬಸವರಾಜ ಹೊರಟ್ಟಿ** ಅವರು ಹಂಪಿ ಕನ್ನಡ ವಿಶ್ವವಿದ್ಯಾಲಯದ ಜಾಗವನ್ನು ಕಾನೂನು ಬಾಹಿರವಾಗಿ ಅತಿಕ್ರಮಣ ಮಾಡಿ ರೆಸಾರ್ಟ್‌ಗಳನ್ನು ನಿರ್ಮಾಣ ಮಾಡುತ್ತಿರುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀಯುತರುಗಳಾದ: ಹನಮಂತ ರುದ್ರಪ್ಪ ನಿರಾಣಿ ಹಾಗೂ ರಾಮಚಂದ್ರ ಗೌಡ** ಅವರುಗಳು ಸವದತ್ತಿ-ಶಿರಸಂಗಿ-ರಾಮದುರ್ಗ ರಸ್ತೆಯ ನಿರ್ಮಾಣ ಕಾರ್ಯವನ್ನು ತೀವ್ರಗತಿಯಲ್ಲಿ ಮುಗಿಸುವ ಬಗ್ಗೆ **ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ** ಗಮನ ಸೆಳೆಯುವುದು.

**ಈ) ಶ್ರೀ ಅರುಣ ಶಹಾಪುರ** ಅವರು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮಕೈಗೊಳ್ಳುವ ಕುರಿತು **ಮಾನ್ಯ ಉನ್ನತ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

## ೦೪. ನಿಯಮ ೩೩೦ರ ಮೇರೆಗೆ

**ಅ) ಶ್ರೀಯುತರುಗಳಾದ: ಕೆ.ಎಸ್. ಈಶ್ವರಪ್ಪ, ಮಾನ್ಯ ವಿರೋಧ ಪಕ್ಷದ ನಾಯಕರು, ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ: ಕೆ.ಬಿ. ಶಾಣಪ್ಪ, ಎಸ್.ವ್ಹಿ. ಸಂಕನೂರ ಹಾಗೂ ಪ್ರದೀಪ್ ಶೆಟ್ಟರ್** ಅವರುಗಳು ಕಪ್ಪತ್ತಗುಡ್ಡ ಮೀಸಲು ಅರಣ್ಯ ಪ್ರದೇಶವನ್ನು "ಕಪ್ಪತ್ತಗುಡ್ಡ ಸಂರಕ್ಷಣಾ ಮೀಸಲು ಪ್ರದೇಶವನ್ನಾಗಿ ಅಧಿಸೂಚನೆ ಸಂಖ್ಯೆ: ಅಪಜೀ.291:ಎಫ್‌ಡಬ್ಲ್ಯೂಎಲ್/2015, ದಿನಾಂಕ: 19.12.2015ರಲ್ಲಿ ಘೋಷಿಸಿದ್ದು, ನಂತರ ಸದರಿ ಆದೇಶವನ್ನು ಹಿಂಪಡೆದಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಅರಣ್ಯ ಸಚಿವರು)**

**ಆ) ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)** ಅವರು ರಾಜ್ಯ ಸರ್ಕಾರದ ಅಂಗ ಸಂಸ್ಥೆಗಳಾದ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ಮತ್ತು ವಿದ್ಯುತ್ ಮಗ್ಗ ಅಭಿವೃದ್ಧಿ ನಿಗಮಗಳ ಮೂಲಕ ವಿದ್ಯಾವಿಕಾಸ ಯೋಜನೆಯಡಿಯಲ್ಲಿ ರಾಜ್ಯದ ಎಲ್ಲಾ ಶಾಲಾ ಮಕ್ಕಳಿಗೆ ನೀಡಲಾಗುತ್ತಿದ್ದ ಸಮವಸ್ತ್ರ ಸರಬರಾಜನ್ನು ಕಡಿತಗೊಳಿಸಿ ಕೇವಲ ಬೆಳಗಾವಿ ವಿಭಾಗದ ಕೆಲವು ಜಿಲ್ಲೆಗಳಿಗೆ ಮಾತ್ರ ಸೀಮಿತಗೊಳಿಸಿರುವ ಹಾಗೂ ಶಿಕ್ಷಣ ಇಲಾಖೆಯು ಅವೈಜ್ಞಾನಿಕವಾಗಿ ದರ ಕಡಿಮೆ ಮಾಡಿರುವುದರಿಂದ, ವಿದ್ಯುತ್ ಮಗ್ಗ ನೇಕಾರರು ಕಂಗಾಲಾಗಿ ಉದ್ಯೋಗವನ್ನು ತೊರೆದು ವಲಸೆ ಹೋಗುವಂತಹ ಪರಿಸ್ಥಿತಿ ನಿರ್ಮಾಣವಾಗಿರುವ ಕುರಿತು ಸದನದಲ್ಲಿ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)**

..3

**೦೫. ಮಹದಾಯಿ ಹಾಗೂ ಕಳಸಾ ಬಂಡೂರಿ ಯೋಜನೆಗಳ ನೀರಿನ ಸಮಸ್ಯೆಗಳ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.**

**೦೬. ನಿಯಮ ೬೮ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲೆ ಚರ್ಚೆ**

**ಶ್ರೀಯುತರುಗಳಾದ: ಕೆ.ಎಸ್. ಈಶ್ವರಪ್ಪ, ಮಾನ್ಯ ವಿರೋಧ ಪಕ್ಷದ ನಾಯಕರು, ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ: ಸೋಮಣ್ಣ ಮ. ಬೇವಿನ ಮರದ, ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಮತ್ತು ಬಸನಗೌಡ ಆರ್. ಪಾಟೀಲ್** ಅವರುಗಳು ಬರಗಾಲದ ಪರಿಸ್ಥಿತಿಯಿಂದಾಗಿ ಕಬ್ಬು ಬೆಳೆಗಾರರ ಆತ್ಮಹತ್ಯೆ, ಕಾರ್ಖಾನೆಗಳಿಂದ ಬಾಕಿ ಪಾವತಿಸಲು ವಿಳಂಬ ಹಾಗೂ ಇತ್ಯಾದಿ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸುವುದು.

**೦೭. ಖಾಸಗಿ ಸದಸ್ಯರ ಕಾರ್ಯಕಲಾಪಗಳು**

**<u>ಖಾಸಗಿ ಸದಸ್ಯರ ವಿಧೇಯಕದ ಮಂಡನೆ</u>**

**"ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ", 2016:-**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** (ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು) ಅವರು:-

ಅ) 2016ನೇ ಸಾಲಿನ **"ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ"**ವನ್ನು ಮಂಡಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**